159 ಸಾ.ಉ
(04)

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ ಇವರು ನಿಯಮ-330ರಡಿ ಗಮನ ಸೆಳೆಯುವ ಸೂಚನೆಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಉತ್ತರ.**

**ವಿಷಯ:**

ರಾಜ್ಯದಲ್ಲಿರುವ ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿರುವ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳ ಕುರಿತು ಮತ್ತು ನೂತನವಾಗಿ ಪ್ರಾರಂಭವಾದ 5 ವಿಶ್ವವಿದ್ಯಾಲಯಗಳು ಅನುದಾನದ ಕೊರತೆಯನ್ನು ಅನುಭವಿಸುತ್ತಿವೆ, ವಿಶೇಷವಾಗಿ ರಾಜ್ಯದ ವಿಜಯಪೂರದಲ್ಲಿ ಮಹಿಳೆಯರಿಗಾಗಿಯೇ ಸ್ಥಾಪಿಸಲಾಗಿರುವ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯಕ್ಕೆ ಆಗುತ್ತಿರುವ ಶಿಕ್ಷಣದ ಕೊರತೆ, ಸಿಬ್ಬಂದಿ ಕೊರತೆ, ಅನುದಾನದ ಕೊರತೆ ಹಾಗೂ ವಿ.ವಿಯು ಎದುರಿಸುತ್ತಿರುವ ಇನ್ನಿತರ ಸಮಸ್ಯೆಗಳ ನಡುವೆ ಶಿಕ್ಷಣ ಮತ್ತು ಬೋಧಕೇತರ ಸಿಬ್ಬಂದಿಗಳಿಲ್ಲದೇ ಆಡಳಿತ ಪ್ರಗತಿ ಸಾಧ್ಯವೇ ಎಂಬುದರ ಕುರಿತು ನಿಯಮ 330ರಡಿಯಲ್ಲಿ ವಿಷಯ ಪ್ರಸ್ತಾಪಿಸಬಯಸುತ್ತೇನೆ.

**ಉತ್ತರ:**

2003-04 ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯವು ವಿಜಯಪುರದಲ್ಲಿ ಪ್ರಾರಂಭವಾಗಿದೆ. ವಿಶ್ವವಿದ್ಯಾನಿಲಯಕ್ಕೆ ಒಟ್ಟು 20 ವಿವಿಧ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳಿಗೆ ಒಟ್ಟು 103 ಬೋಧಕ ಹುದ್ದೆಗಳು (17 ಪ್ರಾಧ್ಯಾಪಕ, 36 ಸಹ ಪ್ರಾಧ್ಯಾಪಕ ಹಾಗೂ 50 ಸಹಾಯಕ ಪ್ರಾಧ್ಯಾಪಕ) ಮಂಜೂರಾಗಿರುತ್ತವೆ. ಹಾಗೂ 173 ಬೋಧಕೇತರ ಹುದ್ದೆಗಳು ಮಂಜೂರಾಗಿರುತ್ತವೆ. ಈ ಹುದ್ದೆಗಳಲ್ಲಿ 55 ಬೋಧಕ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. ಉಳಿದ 48 ಹುದ್ದೆಗಳಿಗೆ ಎದುರಾಗಿ ಅತಿಥಿ ಉಪನ್ಯಾಸಕರನ್ನು ಗೌರವ ಧನದ ಆಧಾರದ ಮೇಲೆ ನೇಮಕಾತಿ ಮಾಡಲಾಗಿದೆ. 173 ಬೋಧಕೇತರ ಹುದ್ದೆಗಳಲ್ಲಿ 09 ಹುದ್ದೆಗಳು ಭರ್ತಿಯಾಗಿದ್ದು ಉಳಿದ 164 ಬೋಧಕೇತರ ಹುದ್ದೆಗಳ ಎದುರಾಗಿ ವೇತನ, ಬಾಹ್ಯಮೂಲ, ಪಿ.ಡಬ್ಲ್ಯೂ.ಜಿ ಹಾಗೂ ಗೌರವ ಧನದ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗಿದೆ.

ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯವು ರಾಜ್ಯದಲ್ಲಿ ಮಹಿಳೆಯರಿಗೆ ಗುಣಮಟ್ಟದ ಉನ್ನತ ಶಿಕ್ಷಣ ಒದಗಿಸುವ ಉದ್ದೇಶದಿಂದ ಸ್ಥಾಪಿತವಾಗಿರುವ ವಿಶೇಷ ಉನ್ನತ ಶಿಕ್ಷಣ ಸಂಸ್ಥೆಯಾಗಿದ್ದು, ಮಹಿಳಾ ಶಿಕ್ಷಣದ ವಿಸ್ತರಣೆ, ಮಹಿಳಾ ಸಬಲೀಕರಣ, ಹಾಗೂ ಶೈಕ್ಷಣಿಕ ಮತ್ತು ಸಂಶೋಧನಾ ಕ್ಷೇತ್ರಗಳ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರವನ್ನು ವಹಿಸುತ್ತದೆ. ವಿಶ್ವವಿದ್ಯಾನಿಲಯದ ಶೈಕ್ಷಣಿಕ ಚಟುವಟಿಕೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಸಮರ್ಪಕ ಸಂಖ್ಯೆಯ ಅರ್ಹ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಅಗತ್ಯವಿರುವ ಹೊರಗುತ್ತಿಗೆ ಸಿಬ್ಬಂದಿ, ಸಮರ್ಪಕ ಅನುದಾನ ಹಾಗೂ ಆಧುನಿಕ ಮೂಲಭೂತ ಸೌಕರ್ಯಗಳು ಅತ್ಯಂತ ಅಗತ್ಯವಿದೆ. ಈ ಸಂಪನ್ಮೂಲಗಳ ಕೊರತೆಯಿಂದ ವಿಶ್ವವಿದ್ಯಾಲಯದ ದೈನಂದಿನ ಶೈಕ್ಷಣಿಕ ಮತ್ತು ಆಡಳಿತಾತ್ಮಕ ನಿರ್ವಹಣೆ ಮೇಲೆ ಮಾತ್ರವಲ್ಲದೆ, ವಿದ್ಯಾರ್ಥಿಗಳಿಗೆ ನೀಡುವ ಶಿಕ್ಷಣ ಗುಣಮಟ್ಟ, ಸಂಶೋಧನಾ ಚಟುವಟಿಕೆಗಳು, ಸಂಶೋಧನಾ ಉತ್ಪಾದಕತೆ ಹಾಗೂ ವಿಶ್ವವಿದ್ಯಾಲಯದ ಒಟ್ಟಾರೆ ಪ್ರಗತಿಯ ಮೇಲೆ ಪರಿಣಾಮ ಬೀರುವುದನ್ನು ಸರ್ಕಾರವು ಗಮನಿಸಿದೆ.

ರಾಜ್ಯದ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿನ ಆರ್ಥಿಕ ಸ್ಥಿತಿಗತಿಗಳ ಬಗ್ಗೆ ಅಧ್ಯಯನ ಮಾಡಲು ಹಿಂದಿನ ಸರ್ಕಾರದ ಹಿಂದಿನ ಮಾನ್ಯ ಉಪ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪಸಮಿತಿಯನ್ನು ರಚಿಸಲಾಗಿತ್ತು. ಸದರಿ ಸಮಿತಿಯು ಈ ವಿಷಯದ ಬಗ್ಗೆ ಮೂರು ಸಭೆಗಳನ್ನು ನಡೆಸಿದ್ದು, ಯಾವುದೇ ಅಂತಿಮ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುವುದಿಲ್ಲ. ಈ ಮಧ್ಯೆ ಹೊಸ ಸರ್ಕಾರವು ಅಸ್ತಿತ್ವಕ್ಕೆ ಬಂದಿರುವುದರಿಂದ ಹಿಂದಿನ ಸಚಿವ ಸಂಪುಟ ಉಪ ಸಮಿತಿಯು ಹಾಲಿ

ಅಸ್ತಿತ್ವದಲ್ಲಿರುವುದಿಲ್ಲ. ಈ ವಿಷಯದ ಬಗ್ಗೆ ಹೊಸದಾಗಿ ಸಚಿವ ಸಂಪುಟ ಉಪ ಸಮಿತಿಯು ರಚನೆಗೊಂಡು ವರದಿ ಸಲ್ಲಿಸಿದ ನಂತರ ಈ ವಿಶ್ವವಿದ್ಯಾನಿಲಯದ ಪ್ರಸ್ತಾಪಿತ ಸಮಸ್ಯೆಗಳನ್ನು ಪರಿಹರಿಸುವ ಬಗ್ಗೆ ಪರಿಶೀಲಿಸಬಹುದಾಗಿರುತ್ತದೆ.

ಮುಂದುವರೆದು 2026-27ನೇ ಸಾಲಿನ ರಾಜ್ಯದ ಆಯವ್ಯಯ ಭಾಷಣದ ಕಂಡಿಕೆ-121ರಲ್ಲಿ ಕರ್ನಾಟಕ ರಾಜ್ಯ ಸಾರ್ವಜನಿಕ ವಿಶ್ವವಿದ್ಯಾನಿಲಯಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳಲ್ಲಿ 1000 ಹುದ್ದೆಗಳನ್ನು ಹಂತ ಹಂತವಾಗಿ ತರ್ಕಬದ್ಧಗೊಳಿಸಿದ ನಂತರ ಭರ್ತಿ ಮಾಡಲಾಗುವುದು ಎಂದು ಘೋಷಿಸಿದ್ದು, ಅದರಂತೆ ಹುದ್ದೆಗಳ ಭರ್ತಿ ಪ್ರಕ್ರಿಯೆಯು ಪ್ರಸ್ತುತ ಜಾರಿಯಲ್ಲಿರುತ್ತದೆ ಹಾಗೂ ಬೋಧಕೇತರ ವೃಂದದ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಅಗತ್ಯಾನುಸಾರ ವಿಶ್ವವಿದ್ಯಾನಿಲಯಗಳಿಂದ ಸ್ವೀಕೃತವಾಗುವ ಪ್ರಸ್ತಾವನೆಗಳ ಬಗ್ಗೆ ನಿಯಮಾನುಸಾರ ಪರಿಶೀಲಿಸಲಾಗುವುದು.

**File No.ED/437/URC/2026.**

**( ಬಸವರಾಜ ರಾಯರೆಡ್ಡಿ )**
ಉನ್ನತ ಶಿಕ್ಷಣ ಸಚಿವರು